ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	473
ಸದಸ್ಯರ ಹೆಸರು	:	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ಮಾನ್ಯ ಮುಖ್ಯಮಂತ್ರಿಗಳು
ಉತ್ತರಿಸಬೇಕಾದ ದಿನಾಂಕ	:	10.12.2020

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 2019-20ನೇ ಸಾಲಿಗೆ ಸರ್ಕಾರ ಸೂಚಿಸಿರುವಂತೆ ರೂ.2.00 ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಈಗಾಗಲೇ ಸಲ್ಲಿಸಿರುವ ಮಾನ್ಯ ಎಲ್ಲಾ ಶಾಸಕರುಗಳು ಸೂಚಿಸಿರುವ ಎಲ್ಲಾ ಕಾಮಗಾರಿಗಳಿಗೆ ಒಟ್ಟು ರೂ.2.00 ಕೋಟಿ ರೂಪಾಯಿ ಅನುದಾನವನ್ನು ನೀಡಲಾಗಿದೆಯೇ;	2019-20ನೇ ಸಾಲಿನಲ್ಲಿ ಈ ಯೋಜನೆಯ ಮಾರ್ಗಸೂಚಿಯಂತೆ ಪ್ರತಿ ಕ್ಷೇತ್ರದಲ್ಲಿ ರೂ.2.00 ಕೋಟಿಗಳಿಗೆ ಕ್ರಿಯಾ ಯೋಜನೆಯನ್ನು ರೂಪಿಸಲು ತಿಳಿಸಲಾಗಿರುತ್ತದೆ. ದಿನಾಂಕ:01.04.2019ರ ಅಂತ್ಯಕ್ಕೆ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ರೂ.948.97 ಕೋಟಿಗಳು ಲಭ್ಯವಿದ್ದು, ಸದರಿ ಕಾಮಗಾರಿಗಳಿಗೆ ಜಿಲ್ಲಾಧಿಕಾರಿಗಳ ಮಟ್ಟದಲ್ಲಿ ಅನುಮೋದನೆ ನೀಡಬಹುದಾಗಿದೆ.
ಆ)	ಇದುವರೆಗೂ ರೂ.2.00 ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಲ್ಲಿಸಿ, ಈಗಾಗಲೇ ಮಾನ್ಯ ಶಾಸಕರುಗಳು ಸೂಚಿಸಿರುವ ಹಲವಾರು ಕಾಮಗಾರಿಗಳಿಗೆ ಇದುವರೆಗೂ ಅನುದಾನ ಒದಗಿಸದಿರಲು ಕಾರಣಗಳೇನು;	ಈ ಬಗ್ಗೆ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ದಿನಾಂಕ:01.04.2019ರ ಅಂತ್ಯಕ್ಕೆ ರೂ.948.97 ಕೋಟಿಗಳು ಲಭ್ಯವಿದ್ದು, ರೂ.2.00 ಕೋಟಿಯಂತೆ 2019-20ರ ಪ್ರಸ್ತಾವನೆಗಳನ್ನು ಅನುಮೋದನೆ ನೀಡಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.
ಇ)	2019-20ನೇ ಸಾಲಿಗೆ ಮಾನ್ಯ ಶಾಸಕರು ನೀಡಿರುವ ರೂ.2.00 ಕೋಟಿ ರೂಪಾಯಿ ಮೊತ್ತದ ಅನುದಾನವನ್ನು ಯಾವಾಗ ನೀಡಲಾಗುವುದು;	ಆರಂಭಿಕ ಶಿಲ್ಕು ಸೇರಿ ಬಿಡುಗಡೆಯಾಗಿರುವ ಅನುದಾನದಲ್ಲಿ ಶೇ 75 ರಷ್ಟು ವೆಚ್ಚ ಭರಿಸಿದಲ್ಲಿ ಉಳಿದ ಅನುದಾನ ಬಿಡುಗಡೆ ಮಾಡಲಾಗುವುದು.
ಈ)	ಯಾವ ಕಾಲಮಿತಿಯೊಳಗೆ ಸದರಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು?	ಲಭ್ಯವಿರುವ ಅನುದಾನದಲ್ಲಿ ಶೇ 75 ರಷ್ಟು ವೆಚ್ಚ ಭರಿಸಿ ಪ್ರಸ್ತಾವನೆ ಸಲ್ಲಿಸಿದರೆ ಅನುದಾನ ಬಿಡುಗಡೆ ಮಾಡಲಾಗುವುದು.

ಸಂಖ್ಯೆ:ಪಿಡಿಎಸ್ 97 ಕೆಎಲ್ಎಸ್ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ